:ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಚೇರಿ : ಬೆಂಗಳೂರು-27:

ಸಂ/ಕರಾಸಾ/ಕೇಕ/ಆಡಳತ/ಎ1-15/ 509 /2020-21 ದಿನಾಂಕ:27/11/2020

## ಆ ದೇ ಶ

**ವಿಷಯ:** ಕರಾರಸಾ ನಿಗಮದಲ್ಲಿ ಅಧಿಕಾರಿ/ಸಿಬ್ಬಂದಿಗಳ ಬಯೋಮೆಟ್ರಿಕ್ ಹಾಜರಾತಿಯನ್ನು ಮುಂದುವರೆಸುವ ಕುರಿತು.

**ಉಲ್ಲೇಖ:** 1.ಸುತ್ತೋಲೆ ಸಂಖ್ಯೆ:1666 ದಿನಾಂಕ:06.02.2020

2.ಕರಾಸಾ/ಕೇಕ/ಆಡಳತ/ಎ1-11/1225/2019-20ದಿನಾಂಕ:13.03.2020

3.ಸಂಖ್ಯೆ:ಸಿಆಸುಇ 78 ಕತವ 2019 ದಿನಾಂಕ:18.11.2020

4.ಸೂಕ್ತಾಧಿಕಾರಿಗಳ ಆದೇಶ ದಿನಾಂಕ:25.11.2020

*****

ಕರಾರಸಾ ನಿಗಮದಲ್ಲಿ ಅಧಿಕಾರಿ/ಸಿಬ್ಬಂದಿಗಳು ಕೇಂದ್ರ ಕಚೇರಿ ಹಾಗೂ ವಿಭಾಗೀಯ ಕಚೇರಿಗಳಲ್ಲಿ ಉಲ್ಲೇಖ:01ರ ಸುತ್ತೋಲೆಯಲ್ಲಿ ಕರ್ತವ್ಯಕ್ಕೆ ಹಾಜರಾಗುವಾಗ ಕಚೇರಿಯ ಮುಖ್ಯದ್ವಾರದಲ್ಲಿರುವ ಬಯೋಮೆಟ್ರಿಕ್ ಯಂತ್ರದಲ್ಲಿ ಹಾಜರಾತಿಯನ್ನು ನಮೂದಿಸಲು ನಿರ್ದೇಶನವಿದ್ದು, ಜಾಗತಿಕ ಮಟ್ಟದಲ್ಲಿ ವ್ಯಾಪಕವಾಗಿ ಹರಡುತ್ತಿರುವ ಕೊರೊನಾ ವೈರಸ್‌ನಿಂದಾಗಿ ಕ.ರಾ.ರ.ಸಾ.ನಿಗಮದಲ್ಲಿ ನೌಕರರ ಹಿತದೃಷ್ಟಿಯಿಂದ ಮುಂಜಾಗ್ರತಾ ಕ್ರಮವಾಗಿ ಕಚೇರಿಗಳ ಮುಖ್ಯದ್ವಾರದಲ್ಲಿರುವ ಬಯೋಮೆಟ್ರಿಕ್ ಯಂತ್ರದಲ್ಲಿ ಅಧಿಕಾರಿ/ಸಿಬ್ಬಂದಿಗಳು ಪ್ರತಿದಿನ ಹಾಜರಾತಿಯನ್ನು ನಮೂದಿಸುವುದನ್ನು ಉಲ್ಲೇಖ:02 ಆದೇಶದಂತೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು.

ಪ್ರಸ್ತುತ, ಕೋವಿಡ್-19 ಪ್ರಕರಣಗಳು ಮತ್ತು ಪಾಸಿಟೀವ್ ಪ್ರಕರಣಗಳ ಸಂಖ್ಯೆ ಕಡಿಮೆಯಾಗಿರುವುದರಿಂದ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಪುನರಾರಂಭಿಸುವಂತೆ ಹಾಗೂ ಬಯೋಮೆಟ್ರಿಕ್‌ನ ಎಲ್ಲಾ ಯಂತ್ರಗಳ ಪಕ್ಕದಲ್ಲಿ ಸೂಕ್ತ ಸ್ಯಾನಿಟೈಸರ್‌ಗಳ ವ್ಯವಸ್ಥೆ ಕಲ್ಪಿಸಲು ಕ್ರಮಕೈಗೊಳ್ಳುವಂತೆ ಉಲ್ಲೇಖ:03 ರ ಸರ್ಕಾರಿ ಸುತ್ತೋಲೆಯಲ್ಲಿ ತಿಳಿಸಿರುವ ಹಿನ್ನೆಲೆಯಲ್ಲಿ, ನಿಗಮದಲ್ಲಿ **ದಿನಾಂಕ:01-12-2020** ರಿಂದ ಜಾರಿಗೆ ಬರುವಂತೆ ಬಯೋಮೆಟ್ರಿಕ್ ಹಾಜರಾತಿಯನ್ನು ಪುನರಾರಂಭಿಸಲಾಗಿದೆ.

ಸಂಬಂಧಪಟ್ಟವರೆಲ್ಲರೂ ಮೇಲಿನ ನಿರ್ದೇಶನಗಳನ್ನು ತಪ್ಪದೆ ಪಾಲಿಸಲು ತಿಳಿಸಲಾಗಿದೆ.

ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು(ಸಿಬ್ಬಂದಿ)

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಕ.ರಾ.ರ.ಸಾ.ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ಮಾನ್ಯ ವ್ಯವಸ್ಥಾಪಕ ನಿರ್ದೇಶಕರ ಹಿರಿಯ ಆಪ್ತ ಕಾರ್ಯದರ್ಶಿಗಳು, ಕರಾರಸಾ ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರ ಮಾಹಿತಿಗಾಗಿ
3. ಮಾನ್ಯ ನಿರ್ದೇಶಕರು(ಸಿ:ಪ)/ನಿರ್ದೇಶಕರು(ಭ:ಜಾ),ಕ.ರಾ.ರ.ಸಾ.ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ.